ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

ಭಾಗ 1ಎ Part – I	ಬೆಂಗಳೂರು, ಸೋಮವಾರ, 29, ಜೂನ್, 2020(ಆಷಾಢ ,8, ಶಕವರ್ಷ ೧೯೪2) Bengaluru, MONDAY, 29, JUNE, 2020(Ashadha,8,ShakaVarsha 1942)	ನಂ. 261 No. 261

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020-21ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ವರ್ಗಾವಣೆ ಮಾರ್ಗಸೂಚಿಗಳು-ಮುಂದುವರೆದ ಸೂಚನೆಗಳು

ಓದಲಾಗಿದೆ:-

1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ:07.06.2013
2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 05 ಸೇನೌವ 2020, ದಿನಾಂಕ:18.06.2020

ಪ್ರಸ್ತಾವನೆ:-

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಮಾತ್ರ ಸದರಿ ಮಾರ್ಗಸೂಚಿಗಳಲ್ಲಿರುವ ಷರತ್ತುಗಳಿಗೊಳಪಟ್ಟು ಮಾಡಬಹುದಾಗಿದೆ.

ಮೇಲೆ ಓದಲಾದ (2) ರ ಸರ್ಕಾರದ ಆದೇಶದಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ಮಿತವ್ಯಯ ಕ್ರಮವಾಗಿ ಹಾಗೂ ಕೋವಿಡ್ ಕೆಲಸಗಳಿಗೆ ಧಕ್ಕೆಯಾಗಬಾರದೆಂಬ ಉದ್ದೇಶದಿಂದ, 2020-21ನೇ ಸಾಲಿನ ಸಾಮಾನ್ಯ ವರ್ಗಾವಣೆ ಮಾಡುವುದನ್ನು ಕೈಬಿಟ್ಟು, ವಿರಳ ಪ್ರಕರಣಗಳಲ್ಲಿ ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಪಡೆದು ವರ್ಗಾವಣೆ ಮಾಡಬಹುದೆಂದು ಆದೇಶಿಸಲಾಗಿತ್ತು. ಸದರಿ ಆದೇಶವು ಪ್ರಸ್ತುತವೂ ಚಾಲ್ತಿಯಲ್ಲಿರುತ್ತದೆ.

ಮುಂದುವರೆದು, 2020-21 ನೇ ಸಾಲಿಗೆ ಗ್ರೂಪ್-ಬಿ ಮತ್ತು ಗ್ರೂಪ್-ಸಿ ವರ್ಗದ ಅಧಿಕಾರಿ/ನೌಕರರಿಗೆ ಮಾತ್ರ ಅನ್ವಯವಾಗುವಂತೆ ಮಿತಿಗೊಳಿಸಿ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6 ನ್ನು ಮೀರದಂತೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲು ನಿರ್ಧರಿಸಿರುವುದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 5 ಸೇನೌವ 2020, ಬೆಂಗಳೂರು, ದಿನಾಂಕ:26.06.2020

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನಮೂದಿಸಿರುವ ಷರತ್ತುಗಳೊಂದಿಗೆ 2020-21 ನೇ ಸಾಲಿಗೆ ಗ್ರೂಪ್-ಬಿ ಮತ್ತು ಗ್ರೂಪ್-ಸಿ ವರ್ಗದ ಅಧಿಕಾರಿ/ನೌಕರರಿಗೆ ಮಾತ್ರ ಅನ್ವಯವಾಗುವಂತೆ ಮಿತಿಗೊಳಿಸಿ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6 ನ್ನು ಮೀರದಂತೆ ದಿನಾಂಕ: 10.07.2020 ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎನ್. ಬಾನೊಳ್ಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು - ವಿಶೇಷ ಕೋಶ)

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE Date: 2020.06.26 19:28:56 +05'30'